ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಮಂಗಳವಾರ ೧೦ನೇ ಸೆಪ್ಟೆಂಬರ್ ೧೯೯೧, ಭಾದ್ರಪದ ೧೯, ಶಕ ೧೯೧೩

ಸದನವು ವಿಧಾನಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ ೧೨.೧೦ ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು : (ಶ್ರೀ ಎಸ್.ಎಂ ಕೃಷ್ಣ) ಅವರು ಪೀಠವನ್ನು ಅಲಂಕರಿಸಿದರು.

ಚುಕ್ಕೆ ಗುರ್ತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು

ಅಧ್ಯಕ್ಷರು : ಈಗ ಪ್ರಶ್ನೋತ್ತರಗಳು

ಹುಬ್ಬಳ್ಳಿ ಧಾರವಾಡ ನಗರಪಾಲಿಕೆಯಿಂದ ಆಕ್ಟ್ರಾಯ್ ವಸೂಲಾತಿ

2612 - ಶ್ರೀ ಪಿ.ಸಿ. ಸಿದ್ದನಗೌಡ (ಕಲಘಟಗಿ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯಿಂದ ಆಕ್ಟ್ರಾಯ್ ವಸೂಲು ಮಾಡುವ ವಿಚಾರ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಎಂದಿನಿಂದ ಇದನ್ನು ಜಾರಿಗೆ ತರಲಾಗುವುದು?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು) :

ಅ) ಇಲ್ಲ

ಆ) ಮೇಲೆ 'ಅ'ಗೆ ಕೊಟ್ಟಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

ಶ್ರೀ ಪಿ.ಸಿ. ಸಿದ್ದನಗೌಡರ್ : ಮಾನ್ಯ ಅಧ್ಯಕ್ಷರೆ ಮಹಾನಗರ ಪಾಲಿಕೆಯವರು ಆಕ್ಟ್ರಾಯ್ ವಸೂಲು ಮಾಡುವ ವಿಚಾರವು ಸರ್ಕಾರದ ಪರಿಶೀಲನೆಯಲ್ಲಿದೆಯೇ? ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ರಸ್ತೆ ಮತ್ತು ಕಟ್ಟಡ ಮೇನ್‌ಟಿನೆನ್ಸ್ ಬಹಳ ಕೆಟ್ಟ ರೀತಿಯಲ್ಲಿದ್ದು ಆರ್ಥಿಕವಾಗಿ ಸಹಾಯವಾಗಲೆಂದು ಇವರು ಆಕ್ಟ್ರಾಯ್ ವಸೂಲು ಮಾಡುವ ವಿಚಾರವು ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ ಎಂದು ಮಾನ್ಯ ಸಚಿವರನ್ನು ಕೇಳಬಯಸುತ್ತೇನೆ?

ಶ್ರೀ ಕೆ.ಜೆ. ಜಾರ್ಜ್ : ಮಾನ್ಯ ಅಧ್ಯಕ್ಷರೆ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯವರು ಆಕ್ಟ್ರಾಯ್ ವಸೂಲು ಮಾಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿ ಇಲ್ಲವೆಂದು ಹೇಳಿದ್ದೇನೆ. ಈಗ ಸಾಕಷ್ಟು ಪುರಸಭೆಗಳು ನಗರಸಭೆಗಳು ಮತ್ತ ಮಹಾನಗರ ಪಾಲಿಕೆಗಳು ಆರ್ಥಿಕ ಮುಗ್ಗಟ್ಟನ್ನು ಎದುರಿಸುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆ. ಈ ಬಗ್ಗೆ ಈ ಸದನದಲ್ಲಿ ಮಾನ್ಯ ಸದಸ್ಯರು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಸರ್ಕಾರವು ಚೀಫ್ ಸೆಕ್ರೆಟರಿಯವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ಸ್ಥಾಪನೆ ಮಾಡಿದೆ. ಇದೊಂದು ಪಾಲಿಸಿ ಡಿಸಿಷನ್ ಕ್ಯಾಬಿನೆಟ್

ಇದನ್ನು ಡಿಸೈಡ್ ಮಾಡಬೇಕು ಆದ್ದರಿಂದ ಆ ಸಮಿತಿಯ ರಿಪೋರ್ಟ್ ಬಂದ ಮೇಲೆ ಇದನ್ನು ಪರಿಶೀಲನೆ ಮಾಡುತ್ತೇವೆ.

ಬೆಳವಾಡಿ ಮಲ್ಲಮ್ಮನ ಪ್ರತಿಮೆಯನ್ನು ನಿರ್ಮಿಸುವ ಬಗ್ಗೆ ಕುರಿತು

2600 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಯುವಜನ ಸೇವಾ ಕ್ರೀಡೆ ಮತ್ತು ಕನ್ನಡ ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಬೆಲಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಬೆಳವಾಡಿಯಲ್ಲಿ ಬ್ರಿಟಿಷರ ದಾಸ್ಯ ಸಂಕೋಲೆಯ ವಿರುದ್ಧ ಹೋರಾಡಿ ಮಡಿದ ಬೆಳವಡಿ ಮಲ್ಲಮ್ಮನ ಪ್ರತಿಮೆಯನ್ನು ನಿರ್ಮಿಸಲು ಸರ್ಕಾರದವರು ಕೈಗೊಂಡಿರುವ ಕ್ರಮವೇನು ಹಾಗೂ ಅದು ಈಗ ಯಾವ ಹಂತದಲ್ಲಿದೆ.

ಶ್ರೀ ಎಸ್. ರಮೇಶ್ (ಯುವಜನ ಸೇವಾ ಕ್ರೀಡೆ ಮತ್ತು ಕನ್ನಡ ಸಂಸ್ಕೃತಿ ಸಚಿವರು)

ಬೆಳವಾಡಿ ಮಲ್ಲಮ್ಮನ ಪ್ರತಿಮೆಯನ್ನು ನಿರ್ಮಿಸುವ ಬಗ್ಗೆ ಸರ್ಕಾರದಲ್ಲಿ ಯಾವ ಪ್ರಸ್ತಾವನೆಯೂ ಇಲ್ಲ. ಈ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಪರಿಷತ್ ಕ್ರಮ ಕೈಗೊಳ್ಳಬೇಕಾಗುತ್ತದೆ.

ಶ್ರೀ ಶಿವಾನಂದ ಹೆಚ್. ಕೌಜಲಗಿ : ಸನ್ಮಾನ್ಯ ಸಭಾಧ್ಯಕ್ಷರೇ ಬ್ರಿಟಿಷರ ವಿರುದ್ಧ ಹೋರಾಡಿದಂಥ ಮಲ್ಲಮ್ಮನ ಆ ಸ್ಥಳವನ್ನು ಅಭಿವೃದ್ಧಿಪಡಿಸಲಿಕ್ಕೆ ಸರ್ಕಾರದಿಂದ ಯಾವ ಅಭಿವೃದ್ಧಿ ಕಾರ್ಯಕ್ರಮವನ್ನು ಹಾಕಿಕೊಳ್ಳಲಾಗಿದೆಯೆಂದು ಕೇಳಿದ್ದೇನೆ. ಅವರು ಇದು ಜಿಲ್ಲಾ ಪರಿಷತ್ ವ್ಯಾಪ್ತಿಯಲ್ಲಿ ಬರುವುದಿಲ್ಲ, ಸರ್ಕಾರದ ವ್ಯಾಪ್ತಿಯಲ್ಲಿ ಬರುತ್ತದೆ ಸರ್ಕಾರದವರು ಆ ಸ್ಥಳದ ಅಭಿವೃದ್ಧಿಗಾಗಿ ಕಾರ್ಯಕ್ರಮವನ್ನು ತೆಗೆದುಕೊಳ್ಳುತ್ತಾರೆಂದು ನೇರವಾಗಿ ಕೇಳಬಯಸುತ್ತೇನೆ.

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಸಭಾಧ್ಯಕ್ಷರೇ ಬೆಳವಾಡಿ ಮಲ್ಲಮ್ಮನವರು ಹೋರಾಟ ಮಾಡಿರತಕ್ಕಂಥ ವಿಚಾರ ಸತ್ಯವಿದೆ. ಅದರ ಬಗ್ಗೆ ಚರಿತ್ರೆ ಬಹಳ ಉದ್ದ ಇದೆ. ಆದರೆ ಕಾಲದ ಅಭಾವವಿರುವುದರಿಂದ ಈಗ ಅವರ ಬಗ್ಗೆ ಮಾತನಾಡುವುದಕ್ಕೆ ಸಾಧ್ಯವಾಗುವುದಿಲ್ಲ ಅಂಥವರ ಪ್ರತಿಮೆಯನ್ನು ನಿರ್ಮಾಣ ಮಾಡತಕ್ಕಂಥ ಸಲಹೆ ಯೋಗ್ಯ ಇದೆ. ಅದು ಇಲ್ಲವೆಂದು ನಾನು ಹೇಳುವುದಿಲ್ಲ ಈಗ ಸಧ್ಯಕ್ಕೆ ಈ ಪ್ರಸ್ತಾವನೆ ಸರ್ಕಾರದ ಮುಂದಿಲ್ಲವೆಂಬ ಮಾತನ್ನು ಹೇಳಿದ್ದೇನೆ. ಹೋರಾಟ ಮಾಡತಕ್ಕಂಥ ಅಂತಹ ಮಹಾನ್ ವ್ಯಕ್ತಿಗಳ ಪ್ರತಿಮೆಯನ್ನು ಹಾಕುವುದರಿಂದ ಪ್ರಸ್ತುತ ಮತ್ತು ಭವಿಷ್ಯದ ಪೀಳಿಗೆಗೆ ಅವು ಸ್ಫೂರ್ತಿ ಮಾರ್ಗದರ್ಶನ ನೀಡತಕ್ಕಂಥ ವಿಚಾರವಾಗುತ್ತವೆ. ಆದುದರಿಂದ ಸರ್ಕಾರ ಅದನ್ನು ಸೂಕ್ತವಾಗಿ ವಿಚಾರ ಮಾಡುತ್ತದೆ ಎನ್ನತಕ್ಕಂಥ ಮಾತನ್ನು ಹೇಳುತ್ತಿದ್ದೇನೆ.

ಶ್ರೀ ಶಿವಾನಂದ ಎಚ್. ಕೌಜಲಗಿ : ಸನ್ಮಾನ್ಯ ಅಧ್ಯಕ್ಷರೇ ಟೂರಿಸಂ ಇಲಾಖೆಯಿಂದ ಆರ್ಕಿಟೆಕ್ಟ್ ಪ್ಲಾನ್ ಮಾಡಿಸಲಾಗಿದೆ ಮಾಡಿಸಿದರೂ ಇನ್ನು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಈಗ ಅಲ್ಲಿ ಎನ್‌ಕ್ರೋಚ್‌ಮೆಂಟ್ ನಡೆದಿದೆ. ಆ ಎನ್‌ಕ್ರೋಚ್‌ಮೆಂಟ್ ಆಗದಂತೆ ಸರ್ಕಾರ ಕೂಡಲೇ ಯಾವ ಕ್ರಮ ಕೈಗೊಳ್ಳುತ್ತದೆ. ಇದನ್ನು ಎಷ್ಟು ದಿವಸಗಳಲ್ಲಿ ತಾವು ಮಾಡುತ್ತೀರಿ?